RNU AIR DHARWAD

**APRIL 22 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಲೋಕಸಭೆ ಚುನಾವಣೆ; ವಿ ʼಯವಾರು ವಿಶೇ ʼ ಮತಗಟ್ಟೆಗಳ ಸ್ಥಾಪನೆ – ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಮನೋಜ್‌ಕುಮಾರ ಮೀನಾ.
- ಪಂಚ ಖಾತರಿ ಯೋಜನೆ ಅನು ್ಠಾನದಲ್ಲಿ ರಾಜ್ಯ ಸರ್ಕಾರ ಯಶಸ್ವಿ; ಮುಂಬರುವ ದಿನಗಳಲ್ಲಿ ಅಭಿವೃದ್ಧಿಗೆ ಹಲವು ಕಾರ್ಯಕ್ರಮಗಳ ಆಯೋಜನೆ – ಮುಖ್ಯಮಂತ್ರಿ ಸಿದ್ದರಾಮಯ್ಯ
- ರಾಜ್ಯಾದ್ಯಂತ ಸ್ವೀಪ್ ಸಮಿತಿಯಿಂದ ಮುಂದುವರೆದ ಮತದಾನ ಜಾಗೃತಿ ಕಾರ್ಯಕ್ರಮ.
- "ಪ್ಲಾಸ್ಟಿಕ್ ವಿರುದ್ಧ ಭೂ ಗ್ರಹ" ಧ್ಯೇಯದೊಂದಿಗೆ ಇಂದು ಭೂ ವಿಶ್ವ ದಿನ.

ಈಗ ವಾರ್ತೆಗಳ ವಿವರ

ಪ್ರಸ್ತುತ ಲೋಕಸಭೆಯ ಚುನಾವಣೆ ರಾಜ್ಯದಲ್ಲಿ ಇದೇ ಏಪ್ರಿಲ್ 26 ಹಾಗೂ ಬರುವ ಮೇ 7 ರಂದು ಎರಡು ಹಂತದಲ್ಲಿ ಮತದಾನ ನಡೆಯಲಿದೆ. ಒಟ್ಟು 5 ಕೋಟಿ 47 ಲಕ್ಷ ಮತದಾರರಿದ್ದು, 58 ಸಾವಿರದ 834 ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ. ಅದರಲ್ಲಿ 1 ಸಾವಿರದ 832 ವಿವಿಧ ವಿ ʼಯವಾರು ವಿಶೇ ʼ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ, ಮನೋಜ್‌ಕುಮಾರ ಮೀನಾ ತಿಳಿಸಿದ್ದಾರೆ. ರಾಜ್ಯದಲ್ಲಿ ಮಹಿಳೆಯರು ನಿರ್ವಹಿಸುವ ಒಟ್ಟು ಸಖಿ ಮತಗಟ್ಟೆಗಳು 1 ಸಾವಿರದ 120, ವಿಶೇ ʼ ಚೇತನರ 224, ಯುವ ಮತಗಟ್ಟೆಗಳು 224, ಜಿಲ್ಲಾ ವಿಶೇ ʼತೆಯ ವಿ ʼಯವಾರು 224, ಸಾಂಪ್ರಾದಾಯಿಕ, ಬುಡಕಟ್ಟು 40 ವಿಶೇ ʼ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ತಿಳಿಸಿದ್ದಾರೆ.

*******

ಬಂಗಾರಪೇಟೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರೋಡ್ ಶೋ ನಡೆಸಿ, ಕೋಲಾರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೌತಮ್ ಪರ ಮತ ಯಾಚಿಸಿದರು. ಕಾಂಗ್ರೆಸ್ ಪಕ್ಷ ಕಳೆದ ವಿಧಾನಸಭಾ ಚುನಾವಣೆ ವೇಳೆ ನೀಡಿದ್ದ ಪಂಚ ಖಾತರಿಗಳನ್ನು ಅನು ್ಠಾನಕ್ಕೆ ತರುವಲ್ಲಿ ಯಶಸ್ವಿಯಾಗಿದ್ದು, ಇದರಿಂದ ರಾಜ್ಯದ ಜನರಿಗೆ ಅನುಕೂಲವಾಗಿದೆ. ಮುಂಬರುವ ದಿನಗಳಲ್ಲಿ ಕೋಲಾರದ ಅಭಿವೃದ್ಧಿಗೆ ಹಲವು ಕಾರ್ಯಕ್ರಮಗಳನ್ನು ರೂಪಿಸುವುದಾಗಿ ತಿಳಿಸಿದರು. ವಿಜಯಪುರ ಜಿಲ್ಲೆಯ ಲೋಕಸಭಾ ಮೀಸಲು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಪರ ಸಚಿವ ಸಂತೋ ್ ಲಾಡ್ ಮತಯಾಚಿಸಿದರು. ಬಳಿಕ ಮಾತನಾಡಿದ ಅವರು, ಜನತೆ ಕಾಂಗ್ರೆಸ್ ಪರ ಒಲವು ತೋರಿದ್ದು, ರಾಜ್ಯದಲ್ಲಿ 18 ರಿಂದ 20 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ತುಮಕೂರು ಕಾಂಗ್ರೆಸ್ ಅಭ್ಯರ್ಥಿ ಎಸ್.ಪಿ.ಮುದ್ದ ಹನುಮೇಗೌಡ ನಿನ್ನೆ ತಿಪಟೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಳೇಪಾಳ್ಯ, ಮನಕೀಕೆರೆ, ಹಾಲ್ಕುರಿಕೆ ಗ್ರಾಮಗಳಲ್ಲಿ ಪ್ರಚಾರ ನಡೆಸಿದರು.

*******

ಲೋಕಸಭೆ ಚುನಾವಣೆಗೆ ಮತದಾನ ದಿನ ಸಮೀಪಿಸುತ್ತಿರುವ ಹಿನ್ನೆಲೆ, ಮತದಾನದ ಕುರಿತು ಜಾಗೃತಿ ಮೂಡಿಸಲು ರಾಜ್ಯಾದ್ಯಂತ ಸ್ವೀಪ ಸಮಿತಿಯಿಂದ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯುತ್ತಿವೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಬೆಂಗಳೂರಿನಲ್ಲಿ ನಿನ್ನೆ ಮತದಾರರ ಜಾಗೃತಿ ಕಾರ್ ಹಾಗೂ ಬೈಕ್‌ಗಳ ರ್‍ಯಾಲಿಗೆ ಚಾಲನೆ ನೀಡಿದರು. ಈ ವೇಳೆ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ

ಉಪಸ್ಥಿತರಿದ್ದರು. ಬಳ್ಳಾರಿ ನಗರ ಪ್ರದೇಶದಲ್ಲಿ ಕಡಿಮೆಯಾಗುತ್ತಿರುವ ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮತದಾನದ ಮಹತ್ವ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಲು ನಿನ್ನೆ ಮ್ಯಾರಥಾನ್ ಓಟ ನಡೆಯಿತು. ಬಳ್ಳಾರಿಯ ಐತಿಹಾಸಿಕ ರೈಲ್ವೇ ನಿಲ್ದಾಣದಿಂದ ಹಮ್ಮಿಕೊಂಡಿದ್ದ ಮ್ಯಾರಥಾನ್ ಓಟಕ್ಕೆ ಜಿಲ್ಲೆಯ ಚುನಾವಣಾ ರಾಯಭಾರಿ ಕ್ರೀಡಾಪಟು ನಂದಿನಿ ಅಗಸರ ಚಾಲನೆ ನೀಡಿದರು. ಉಡುಪಿ ನಗರದ ವಳಕಾಡು ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಆಯೋಜಿಸಿದ್ದ 'ನಮ್ಮ ನಡೆ ಮತ ಕಟ್ಟೆ ಕಡೆ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಜಿಲ್ಲಾಧಿಕಾರಿ ವಿದ್ಯಾಕುಮಾರಿ ಕೆ, ಪ್ರಜಾತ್ತಾತ್ಮಕ ಪ್ರಕ್ರಿಯೆಯಲ್ಲಿ ಮತದಾನದ ಹಕ್ಕು ಸಂವಿಧಾನಿಕವಾಗಿ ಪ್ರತಿಯೊಬ್ಬ ನಾಗರೀಕರಿಗೂ ನೀಡಿದೆ ಇದನ್ನು ಪ್ರತಿಯೊಬ್ಬರು ತಪ್ಪದೇ ಚಲಾಯಿಸಬೇಕು ಎಂದು ಹೇಳಿದರು. ಯುವ ಮತದಾರರು ಮತದಾನದ ಮಹತ್ವವನ್ನು ಅರಿತುಕೊಂಡು ತಮ್ಮ ಮತವನ್ನು ಚಲಾಯಿಸಬೇಕು ಹಾಗೂ ಸಮಾಜದ ಇತರ ಮತದಾರರೂ ಮತದಾನದಲ್ಲಿ ಭಾಗವಹಿಸುವಂತೆ ಪ್ರೇರೇಪಣೆ ಮಾಡಬೇಕು ಎಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್ ವಸ್ತ್ರದ್ ಮಂಗಳೂರಿನ ಬಲ್ಮಠ ಸರ್ಕಾರಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಮತದಾರರ ಜಾಗೃತಿ ಅಭಿಯಾನದಲ್ಲಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

*******

ಇಂದು ಭೂಮಿ ಜಾಗೃತಿ ವಿಶ್ವ ದಿನ. ಹವಾಮಾನ ಬದಲಾವಣೆಯ ಪರಿಣಾಮ ತಿಳಿಯುವ ಪ್ರಾಮುಖ್ಯತೆ ಮತ್ತು ನಮ್ಮ ಪರಿಸರವನ್ನು ರಕ್ಷಿಸುವ ಮಾರ್ಗಗಳ ಬಗ್ಗೆ ಜನಜಾಗೃತಿ ಮೂಡಿಸಲು ಭೂಮಿ ವಿಶ್ವ ದಿನವನ್ನು ಆಚರಿಸಲಾಗುತ್ತದೆ. ಪ್ರಸಕ್ತ ವರ್ಷದ ಭೂ ವಿಶ್ವ ದಿನಾಚರಣೆಯ ಧ್ಯೇಯ – "ಪ್ಲಾಸ್ಟಿಕ್ ವಿರುದ್ಧ ಭೂ ಗ್ರಹ" ಎಂಬುದಾಗಿದೆ. ಹೆಚ್ಚುತ್ತಿರುವ ಜನಸಂಖ್ಯೆ, ಮಣ್ಣಿನ ಸವಕಳಿ, ಕ್ಷೀಣಿಸುತ್ತಿರುವ ಪರಿಸರ, ಅರಣ್ಯನಾಶ ಹಾಗೂ ಜಲ ಮಾಲಿನ್ಯದಂತಹ ಹಲವು ಸಮಸ್ಯೆಗಳು, ಭೂಮಿಯ ಅನಾರೋಗ್ಯಕ್ಕೆ ಕಾರಣವಾಗುತ್ತಿವೆ. ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಲೋಕಸಭಾ ಚುನಾವಣೆ ಹಿನ್ನೆಲೆ, ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಚುನಾವಣಾ ವೆಚ್ಚ ವೀಕ್ಷಕ ಆರ್.ಗುಲ್ಜಾರ್ ಬೇಗಂ ಗದಗ ನಗರದ ಜಿಲ್ಲಾಡಳಿತ ಭವನದಲ್ಲಿರುವ ನಿಯಂತ್ರಣ ಕೊಠಡಿಗೆ ಭೇಟಿ ನೀಡಿ, ದೂರು ದಾಖಲಾತಿ, ಜಿಪಿಎಸ್, ಚೆಕ್ ಪೋಸ್ಟ್‌ಗಳ ಕಣ್ಗಾವಲು, ಸಿ–ವಿಜಿಲ್ ಆ್ಯಪ್ ನಿರ್ವಹಣೆ ಹಾಗೂ ಎಂಸಿಎಂಸಿ ಮತ್ತಿತರ ಚುನಾವಣಾ ಕಾರ್ಯ ಚಟುವಟಿಕೆಗಳ ಕುರಿತು ಮಾಹಿತಿ ಪಡೆದರು.

ರಾಯಚೂರು ಲೋಕಸಭಾ ಸಾರ್ವತ್ರಿಕ ಚುನಾವಣೆ 2024ನ್ನು ಮುಕ್ತ, ನ್ಯಾಯಸಮ್ಮತವಾಗಿ ನಡೆಸಲು ಮತ್ತು ಅಕ್ರಮ ಚಟುವಟಿಕೆಗಳ ದೂರು ದಾಖಲು ಮಾಡಿಕೊಳ್ಳಲು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಈಗಾಗಲೇ ಕಾರ್ಯಪ್ರವೃತ್ತವಾಗಿರುವ ಚುನಾವಣಾ ದೂರು ನಿಯಂತ್ರಣ ಕೊಠಡಿ, ಮಾಧ್ಯಮ ಪ್ರಮಾಣೀಕರಣ ಮತ್ತು ನಿಗಾ ಕೇಂದ್ರಕ್ಕೆ ಸಾಮಾನ್ಯ ವೀಕ್ಷಕರಾದ ಅಜಯ್ ಪ್ರಕಾಶ ಹಾಗೂ ಪೊಲೀಸ್ ವೀಕ್ಷಕರಾದ ಡಾಕ್ಟರ್ ಸತೀಶ ಕುಮಾರ ನಿನ್ನೆ ಭೇಟಿ ನೀಡಿ ವೀಕ್ಷಿಸಿದರು.

*******

ಇಂದು ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಎಂದು ವಿಧಾನಪರಿ 'ತ್ ಸದಸ್ಯ ರವಿಕುಮಾರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜನರಿಗೆ ಅನ್ಯಾಯ ಮಾಡಿಲ್ಲ. ಬದಲಾಗಿ ಅನುಕೂಲ ಮಾಡಿಕೊಟ್ಟಿದೆ. ಆದರೆ ರಾಜ್ಯ ಸರ್ಕಾರ ರಾಜ್ಯದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ವಿಫಲವಾಗಿದೆ. ರೈತರಿಗೆ ನೀಡಬೇಕಿರುವ 750 ಕೋಟಿ ರೂಪಾಯಿ ಹಾಲು ಪ್ರೋತ್ಸಾಹ ಧನವನ್ನು ಬಾಕಿ ಉಳಿಸಿಕೊಂಡಿದೆ. ಪರಿಶಿ ್ಟ ಸಮೂದಾಯದ ಅಭಿವೃದ್ಧಿ ಹಣವನ್ನು ಬಿಡುಗಡೆ ಮಾಡಿಲ್ಲ ಎಂದು ಹೇಳಿದರು.

*******

ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ತಾಲೂಕಿನ ಅಕ್ವಾಡ ಗ್ರಾಮದ ಬಳಿಯ ಕಾಳಿ ನದಿಯಲ್ಲಿ ಮುಳುಗಿ ಒಂದೇ ಕುಟುಂಬದ ಆರು ಮಂದಿ ಮೃತಪಟ್ಟ ಘಟನೆ ನಿನ್ನೆ ಸಂಭವಿಸಿದೆ. ಮೃತರು ಹುಬ್ಬಳ್ಳಿಯ ಈಶ್ವರ ನಗರದ ನಿವಾಸಿಗಳಾಗಿದ್ದು,

ಪ್ರವಾಸಕ್ಕೆಂದು ಅಕ್ವಾಡಕ್ಕೆ ಬಂದಿದ್ದ ವೇಳೆ ನದಿಯಲ್ಲಿ ಈಜಲು ಹೋದಾಗ ಈ ದುರಂತ ನಡೆದಿದೆ. ಒಟ್ಟು ಎಂಟು ಮಂದಿ ನದಿಯಲ್ಲಿ ಈಜಲು ಹೋಗಿದ್ದರು. ಆದರೆ, ಈ ಪೈಕಿ ಆರು ಮಂದಿ ಮುಳುಗಿದ್ದು, ಇಬ್ಬರು ಅಪಾಯದಿಂದ ಪಾರಾಗಿದ್ದಾರೆ. ಆರು ಮಂದಿಯ ಮೃತ ದೇಹಗಳನ್ನು ಪೊಲೀಸರು ಹೊರತೆಗೆದು, ದಾಂಡೇಲಿ ಆಸ್ಪತ್ರೆಗೆ ರವಾನಿಸಿದ್ದಾರೆ.

*******

ರಾಜ್ಯಾದ್ಯಂತ ನಿನ್ನೆ ಜೈನ ಧರ್ಮದ 24ನೇ ತೀರ್ಥಂಕರ ಭಗವಾನ್ ಮಹಾವೀರರ ಜನ್ಮ ದಿನವನ್ನು ಆಚರಿಸಲಾಯಿತು. ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಭಗವಾನ ಶ್ರೀ ಮಹಾವೀರ ಅವರ ಭಾವಚಿತ್ರಕ್ಕೆ ಪು ಾ್ಪರ್ಚನೆ ಮಾಡಿ ಗೌರವ ಸಲ್ಲಿಸಿದರು. ವಿಜಯಪುರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಭಗವಾನ್ ಮಹಾವೀರರ ಭಾವಚಿತ್ರಕ್ಕೆ ಪು ಾ್ಪರ್ಚನೆ ಮಾಡಿದರು. ಸತ್ಯ, ಅಹಿಂಸೆ, ಬ್ರಹ್ಮಚರ್ಯ, ಆಸ್ತೇಯ, ಅಪರಿಗ್ರಹ ಎನ್ನುವ ಐದು ಸರಳ ಪದಗಳಲ್ಲಿ ಜೀವನ ಮೌಲ್ಯಗಳನ್ನು ಭಗವಾನ್ ಮಹಾವೀರ ಬೋಧಿಸಿದ್ದಾರೆ ಎಂದು ಚಿತ್ರದುರ್ಗ ಜಿಲ್ಲಾ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಉಡುಪಿ – ಚಿಕ್ಕಮಗಳೂರು ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಯ ಅಂಚೆ ಮತದಾನ ಪ್ರಗತಿಯಲ್ಲಿದೆ. ಚಿಕ್ಕಮಗಳೂರು ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಾದ ಚಿಕ್ಕಮಗಳೂರು, ಮೂಡಿಗೆರೆ, ಶೃಂಗೇರಿ, ತರೀಕೆರೆ, ಕಡೂರು ಕ್ಷೇತ್ರಗಳಲ್ಲಿ ಅಂಚೆ ಮತದಾನಕ್ಕೆ ಸ್ಥಳಗಳನ್ನು ಗುರುತಿಸಲಾಗಿದ್ದು, ಇಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮತಚಲಾವಣೆಗೆ ಅವಕಾಶವಿರುತ್ತದೆ ಜಿಲ್ಲಾ ಚುನಾವಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26 ರಂದು ಮತದಾನ ನಡೆಯಲಿದೆ. ಮತದಾನ ದಿನ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಏಪ್ರಿಲ್ 24 ರ ಸಂಜೆ 6 ಗಂಟೆಯಿಂದ ಏಪ್ರಿಲ್ 26 ಮಧ್ಯರಾತ್ರಿ 12 ಗಂಟೆಯವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಮಾಡುವುದನ್ನು ನಿ ೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

*******

ಚಿಕ್ಕಮಗಳೂರು ಜಿಲ್ಲೆಗೆ ಲೋಕಸಭಾ ಚುನಾವಣಾ ಪ್ರಚಾರಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಇದೇ ತಿಂಗಳ 24 ರಂದು ಆಗಮಿಸಲಿದ್ದು, ಉಡುಪಿ– ಚಿಕ್ಕಮಗಳೂರು ಕ್ಷೇತ್ರದ ಅಭ್ಯರ್ಥಿ ಕೋಟಾ ಶ್ರೀನಿವಾಸ್ ಪೂಜಾರಿ ಪರವಾಗಿ ಪ್ರಚಾರ ನಡೆಸಲಿದ್ದಾರೆ ಎಂದು ಮಾಜಿ ಸಚಿವ ಸಿ.ಟಿ ರವಿ ತಿಳಿಸಿದ್ದಾರೆ.

*******

ಹಾಸನ ಜಿಲ್ಲೆಯಲ್ಲಿ ಕಾಡಾನೆ ಸೆರೆ ಹಿಡಿಯುವ ಕಾರ್ಯಾಚರಣೆ ನಡೆಯುತ್ತಿದ್ದು ಜಿಲ್ಲೆಯ ಮಲೆನಾಡು ಭಾಗದಲ್ಲಿ ಈ ವರೆಗೆ ಬೆಳೆಹಾನಿ, ಮಾನವ ಹಾನಿ ಹಾಗೂ ಉಪಟಳ ನೀಡುತ್ತಿದ್ದ ಎರಡು ಕಾಡಾನೆಗಳನ್ನು ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ.

*******

ಸಾರ್ವತ್ರಿಕ ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ, ಶಾಂತಿ ಪಾಲನೆ, ಕಾನೂನು ಮತ್ತು ಸುವ್ಯವಸ್ಥೆ ಮತ್ತು ಸಾರ್ವಜನಿಕರ ಸುರಕ್ಷತೆಯನ್ನು ಕಾಪಾಡುವ ನಿಟ್ಟಿನಲ್ಲಿ, ಮತದಾನ ಮುಕ್ತಾಯವಾಗುವ 48 ಗಂಟೆಗಳ ಅವಧಿಯೊಳಗಿನ ದಿನಗಳು ಮತ್ತು ಮತ ಎಣಿಕೆಯ ದಿನದಂದು ಹಾಗೂ ಚುನಾವಣಾ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಹಿತದೃಷ್ಟಿಯಿಂದ ಏಪ್ರಿಲ್ 24 ರಂದು ಸಂಜೆ 5 ಗಂಟೆಯಿಂದ ಏಪ್ರಿಲ್ 26 ರ ಮಧ್ಯರಾತ್ರಿ 12 ಗಂಟೆಯವರೆಗೆ ಹಾಗೂ ಜೂನ್ 3 ರ ಮಧ್ಯರಾತ್ರಿ 12 ಗಂಟೆಯಿಂದ ಜೂನ್ 4 ರ ಮಧ್ಯರಾತ್ರಿ 12 ಗಂಟೆಯವರೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಮದ್ಯ ಉತ್ಪಾದನೆ, ಮಾರಾಟ, ಹಂಚಿಕೆ, ಸಾಗಾಣಿಕೆ, ಶೇಖರಣೆ, ಇತ್ಯಾದಿಗಳನ್ನು ನಿ ೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾಕ್ಟರ್ಎನ್.ಶಿವಶಂಕರ ಆದೇಶಿಸಿದ್ದಾರೆ.

*******